ಶ್ರೀಮತಿ ನಫೀಸ್ ಫಜಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) :---

ಅ) ಮರಣೊತ್ತರ ಪರೀಕ್ಷೆಗಾಗಿ ಸುಮಾರು ೧೫ ಶವಗಳು ಬರುತ್ತವೆ.

ಆ) ಶವಗಳನ್ನು ಸಂರಕ್ಷಿಸಲು ಮಂಜೂಗಡೆ ಹಾಗೂ ಇತರ ಔಷಧಿಗಳಿಗಾಗಿ ಆಸ್ಪತ್ರೆಗೆ ಬಿಡುಗಡೆ ಮಾಡುವ ಆಯವ್ಯಯದಲ್ಲಿಯೇ ಭರಿಸಲಾಗುತ್ತದೆ. ಇದಕ್ಕಾಗಿ ಪ್ರತ್ಯೇಕ ಆಯವ್ಯಯ ಇರುವುದಿಲ್ಲ.

ಇ) ಅನಾಥ ಶವಗಳನ್ನು ಸಂರಕ್ಷಿಸಿ ಕೊಡದಂತೆ ಇಡಲಾಗುವುದು. ಶವ ಪರೀಕ್ಷೆ ಮಾಡಿದ ನಂತರ ಸರ್ಕಾರ ನಿಗಧಿಪಡಿಸಿರುವ ರೂ.೨೫೦.೦೦ನ್ನು ನೀಡಿ ಶವ ಸಂಸ್ಕಾರಕ್ಕೆ ವ್ಯವಸ್ಥೆ ಮಾಡಲಾಗುತ್ತಿದೆ.

ಈ) ಯಾವುದೇ ಕೊಳೆತ ಶವವು ಆಸ್ಪತ್ರೆಯ ಆವರಣದಲ್ಲಿ ಅನಾಥವಾಗಿ ಬಿದ್ದಿರದಂತೆ ಗಮನಹರಿಸಲಾಗುತ್ತಿದೆ.

ಉ) ಸುವ್ಯವಸ್ಥೆಯ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಊ) ಪೋಲೀಸರಿಂದ ಮಹಜರ್ ವರದಿ ಬಂದ ತಕ್ಷಣ ಮರಣೋತ್ತರ ಪರೀಕ್ಷೆ ಮಾಡಿ ಸಂಬಂಧಿಸಿದವರಿಗೆ ನೀಡಲಾಗುತ್ತದೆ.

ಬೆಳವಡಿಯಲ್ಲಿ ಸರ್ಕಾರಿ ಡಿಪ್ಲೋಮಾ ಕಾಲೇಜನ್ನು ಪ್ರಾರಂಭಿಸುವುದು

2561 (2959) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) :---
ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ವೀರ ಮಲಮ್ಮನ ಹೆಸರಿನಿಂದ ಬೆಳವಡಿಯಲ್ಲಿ ಸರ್ಕಾರಿ ಡಿಪ್ಲೋಮಾ ಕಾಲೇಜನ್ನು ಪ್ರಾರಂಭಿಸಲು ಎ.ಐ.ಸಿ.ಟಿ.ಇ ದೆಹಲಿದೆ ಪ್ರಸ್ತಾವನೆಯನ್ನು ಕಳುಹಿಸಲಾಗಿತ್ತು; ಈಗ ಆ ಪ್ರಸ್ತಾವನೆ ಯಾವ ಹಂತದಲ್ಲಿದೆ;

ಆ) ಮುಖ್ಯಮಂತ್ರಿಗಳು ಬೆಳವಡಿ ಬಂದಾಗ ಡಿಪ್ಲೋಮಾ ಕಾಲೇಜನ್ನು ಪ್ರಾರಂಭಿಸಲು ಕಟ್ಟಿರುವ 06 ಕೋಣೆಗಳ ಕಟ್ಟಡ ಪಾಲಿ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಮೂಲಭೂತ ಸೌಲಭ್ಯ ಹೊಂದಿರುವ ಈ ಸರ್ಕಾರಿ ಕಟ್ಟಡ ಉಚಿತವಾಗಿ ಲಭ್ಯವಿದ್ದು, ಬೆಳವಡಿಯಲ್ಲಿ ಸರ್ಕಾರಿ ಡಿಪ್ಲೋಮಾ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಡಾ: ಜಿ. ಪರಮೇಶ್ವರ ಉನ್ನತ ಶಿಕ್ಷಣ, ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವರು) :—

ಅ) ಬೆಳಗಾಂ ಜಿಲ್ಲೆಯ ಬೆಳವಾಡಿಯಲ್ಲಿ ಒಂದು ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭಿಸುವ ಕುರಿತು ಎ.ಐ.ಸಿ.ಟಿ.ಇ ನವದೆಹಲಿಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿತ್ತು. ಈ ದಿಸೆಯಲ್ಲಿ ಸದರಿ ಪಾಲಿಟೆಕ್ನಿಕ್‌ಗೆ ಭೂಮಿ, ಕಟ್ಟಡ ಹಾಗೂ ಫಂಡ್ಸ್ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿಕೊಂಡು ವಿವರ ನೀಡಲು ಎ.ಐ.ಸಿ.ಟಿ.ಇ, ನವದೆಹಲಿ ರವರು ರಾಜ್ಯ ಸರ್ಕಾರಕ್ಕೆ ಕೇಳಿರುತ್ತಾರೆ. ಈ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ತಾಂತ್ರಿಕ ಶಿಕ್ಷಣ ಇಲಾಖಾ ವತಿಯಿಂದ ಯಾವುದೇ ಕಟ್ಟಡ ನಿರ್ಮಿಸಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಳಗಾಂ ಜಿಲ್ಲೆಯಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಶಾಲೆಗಳಿಗೆ ಕುಡಿಯುವ ನೀರಿನ ಸೌಲಭ್ಯ

2562(2960) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಸರ್ಕಾರಿ ಹಾಗೂ ಖಾಸಗಿ ಪ್ರಾಥಮಿಕ ಮಾಧ್ಯಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಶುದ್ಧವಾದ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ವಿದ್ಯಾರ್ಥಿಗಳಿಗೆ ಶುದ್ಧವಾದ ಕುಡಿಯುವ ನೀರನ್ನು ಪೂರೈಸಲು ಯಾವ ಯೋಜನೆಯನ್ನು ಹಾಕಿಕೊಂಡಿದೆ;

ಇ) ಪ್ರತಿಯೊಂದು ಶಾಲಾ ಆವರಣದಲ್ಲಿ ಕೊಳವೆಬಾವಿಗಳನ್ನು ತೋಡಿಸಿ, ವಿದ್ಯಾರ್ಥಿಗಳಿಗೆ ಶುದ್ಧವಾದ ನೀರನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ;

ಈ) ಬೆಳಗಾಂವ ಜಿಲ್ಲೆಯಲ್ಲಿ ಎಷ್ಟು ಶಾಲೆಯಲ್ಲಿ ಶುದ್ಧ ಕುಡಿಯುವ ನೀರಿನ ಅನುಕೂಲತೆ ಇರುವುದು ಹಾಗೂ ಎಷ್ಟು ಶಾಲೆಯಲ್ಲಿ ಈ ಸೌಲಭ್ಯ ಇರುವುದಿಲ್ಲ; (ತಾಲ್ಲೂಕುವಾರು ವಿವರ ನೀಡುವುದು)

ಉ) ಬೆಳಗಾಂವ ಜಿಲ್ಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಎಷ್ಟು ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರುವುದು; ಎಷ್ಟು ಶಾಲೆಗಳಲ್ಲಿ ಈ ವ್ಯವಸ್ಥೆ ಇರುವುದಿಲ್ಲ; (ವಿವರ ನೀಡುವುದು)